ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

ಹೇಳಿಕೆ ಹಾಳೆ
(ಆರ್.ಪಿ. ಸಂಖ್ಯೆ 57)
ನಮೂನೆ ಸಂಖ್ಯೆ 4
(ಸಿವಿಲ್)

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 355/2019

..................................................................

CW 02
PW 02

| | | |
|---|---|---|
| ಹೆಸರು | : | ವಿಠ್ಠಲ ಪಿಂಗಳೆ |
| ತಂದೆಯ ಹೆಸರು | : | ಭಾಗೇಶ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಕೃಷಿ ಕೆಲಸ |
| ವಾಸಸ್ಥಳ | : | ಪಣಜಿ, ರಾಜ್ಯಃ ಗೋವಾ. |

ದಿನಾಂಕ 18-09-2024 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** ः ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ಚಾಸಾ 1 ನನ್ನ ಊರಿನವರು. ಈಗ ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ಇರುತ್ತದೆ.

ಸಾಕ್ಷಿಗೆ ನಿಪಿ 1 ಅನ್ನು ತೋರಿಸಿ, ತನ್ನ ಸಹಿಯನ್ನು ಗುರುತಿಸಲು ಸೂಚಿಸಿದ್ದು, ಸಾಕ್ಷಿಯು ಸದರಿ ದಾಖಲೆಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 1 ಬಿ ಎಂದು ಗುರುತಿಸಲಾಯಿತು. ನಿಪಿ 1 ರಲ್ಲಿ ಬರೆದ ವಿಷಯಗಳು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾವ್ರೇ ಜರುಗಿಸಿಲ್ಲ ಹಾಗೂ ಮು.ಮಾ. ಗಳನ್ನು ಜಪ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷ್ಯ ಹಾಗೂ ಪ್ರಕರಣದ ಇತರ ಅಂಶಗಳನ್ನು ಗಮನಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು ).

**ಪಾಟೀ ಸವಾಲು : ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ದಿನಾಂಕ 19-06-2018 ರಂದು ನನ್ನನ್ನು ಮತ್ತು ಚಾಸಾ 1 ರವರನ್ನು ಅರಣ್ಯ ಅಧಿಕಾರಿಗಳು ಪಂಚನಾಮೆಗೆ ಕರೆದಿರುತ್ತಾರೆ ಎಂದರೆ ಗೊತ್ತಿಲ್ಲ. ಅರಣ್ಯ ಅಧಿಕಾರಿಗಳು ನಿಪಿ 1 ರಂತೆ ಪಂಚನಾಮೆ ಜರುಗಿಸಿ ನಿಪಿ 1 ರಲ್ಲಿ ಹೇಳಿರುವ ನಗಗಳನ್ನು ಜಪ್ತುಪಡಿಸಿಕೊಂಡು ಬುಡಚಿ ಪಂಚನಾಮೆ ಹಾಗೂ ಜಪ್ತುಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಗೊತ್ತಿಲ್ಲ. ಈಗ ಸಾಕ್ಷಿಗೆ ನಾಲ್ಕು ಭಾವಚಿತ್ರಗಳನ್ನು ತೋರಿಸಿ ಸದರಿ ಭಾವಚಿತ್ರಗಳಲ್ಲಿ ಕಂಡು ಬರುವ ಮಾಲುಗಳನ್ನು ಈ ಹಿಂದೆ ನೋಡಿದ್ದೀರಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ. ಈಗ ನ್ಯಾಯಾಲಯದ ಮುಂದಿರುವ ಆರೋಪಿತರು ಪರಿಚಯ ಇರುತ್ತಾರೆ. ಮು.ಮಾ ಗಳೊಂದಿಗೆ ಅರಣ್ಯ ಅಧಿಕಾರಿಗಳು ಆರೋಪಿತರನ್ನು ದಸ್ತಗೀರ್ ಮಾಡಿದ್ದಾರೆ ಎಂದರೆ ಸರಿಯಲ್ಲ. ನಿಪಿ 1 ರಂತೆ ಪಂಚನಾಮೆ ಜರುಗಿಸಿ ನನ್ನ ಸಹಿ ಪಡೆದಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :** ಆರೋಪಿತರ ಪರ ಶ್ರೀಮತಿ ಆರ್ ಎಮ್ ಸಿ ವಕೀಲರು ಏನು ಇಲ್ಲ ಎನ್ನುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.